# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5ಹೆಚ್)ಪಿ.ಆರ್/39 /24-25

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 31.7.24

**ಕಛೇರಿಆದೇಶ**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-'ಸಿ' ವೃಂದದ ತೋಟಗಾರಿಕೆ ಸಹಾಯಕರ ಸಾಮಾನ್ಯ ವರ್ಗಾವಣೆ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ: ನಅಇ 63 ಎಂ.ಎನ್.ಯು 2023, ದಿ: 04-07-2024
2) ಸಂಖ್ಯೆ: ಬಿ12(5)ಪಿ.ಆರ್/112/24-25, ದಿನಾಂಕ: 20-07-2024ರ ಆಂತರಿಕ ಕಛೇರಿ ಟಿಪ್ಪಣಿ
3) ಸಂಖ್ಯೆ: ಬಿ12(5)ಪಿ.ಆರ್/112/24-25, ದಿನಾಂಕ: 20-07-2024ರ ಸುತ್ತೋಲೆ
4) ಮಾನ್ಯ ಮುಖ್ಯ ಆಯುಕ್ತರು ರವರು ಸಂಖ್ಯೆ: ಬಿ12(5)ಪಿ.ಆರ್/112/24-25 ರಲ್ಲಿ ದಿನಾಂಕ: 22-07-2024ರಂದು ಹೊರಡಿಸಿರುವ ಮಾರ್ಗಸೂಚಿಗಳು
5) ಸಂಖ್ಯೆ: ಬಿ12(5)ಪಿ.ಆರ್/112/24-25, ದಿನಾಂಕ: 26-07-2024ರ ಕಛೇರಿ ಆದೇಶ
6) ದಿನಾಂಕ: 29-07-2024ರಂದು ಸ್ಥಳ ಆಯ್ಕೆ ಸಂಬಂಧ ನಡೆದ ಕೌನ್ಸಿಲಿಂಗ್ ಪ್ರಕ್ರಿಯೆ.

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-(1)ರಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಆದೇಶದನುಸಾರ 10 ವರ್ಷಗಳಿಗೂ ಮಿಗಿಲಾಗಿ ಒಂದೇ ವಲಯದಲ್ಲಿ ಕಾರ್ಯನಿರ್ವಹಿಸಿರುವ ಗ್ರೂಪ್-'ಸಿ' ತೋಟಗಾರಿಕೆ ಸಹಾಯಕರು ವೃಂದದ ಸಿಬ್ಬಂದಿಗಳನ್ನು ಬೇರೆ ವಲಯಕ್ಕೆ ವರ್ಗಾವಣೆ ಮಾಡುವ ಸಂಬಂಧ ಉಲ್ಲೇಖ-(6)ರಂತೆ ನಡೆದ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಕೆಳಕಂಡ ತೋಟಗಾರಿಕೆ ಸಹಾಯಕರು ಆಯ್ಕೆ ಮಾಡಿರುವಂತೆ ಅವರ ಹೆಸರಿನ ಮುಂದೆ ನಮೂದಿಸಿರುವ ಸ್ಥಳದಲ್ಲಿ ಕಾರ್ಯನಿರ್ವಹಿಸಲು ವರ್ಗಾಯಿಸಿ ಆದೇಶಿಸಿದೆ.

| ಕ ಸಂ | ಹೆಸರು | ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳ | ಕೌನ್ಸಿಲಿಂಗ್ ಮುಖಾಂತರ ಆಯ್ಕೆ ಮಾಡಿಕೊಂಡಿರುವಂತೆ ವರ್ಗಾಯಿಸಿ ನೇಮಿಸಿರುವ ಸ್ಥಳ |
|---|---|---|---|
| 1. | ಶ್ರೀ ವೆಂಕಟೇಶ್.ಸಿ.ಎಂ | ತೋಟಗಾರಿಕೆ ಅಧೀಕ್ಷಕರು (ಪೂರ್ವ) | ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಪಶ್ಚಿಮ) ಕಛೇರಿಯಲ್ಲಿ ಖಾಲಿ ಇರುವ ತೋಟಗಾರಿಕೆ ಸಹಾಯಕರ ಹುದ್ದೆಗೆ. |

ಮೇಲ್ಕಂಡ ಆದೇಶದನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು / ಇಲಾಖಾ ಮುಖ್ಯಸ್ಥರುಗಳು ವರ್ಗಾವಣೆಗೊಂಡ ನೌಕರರು ವರ್ಗಾಯಿಸಲಾಗಿರುವ ಸ್ಥಳದಲ್ಲಿ ಕಾರ್ಯನಿರ್ವಹಿಸಲು ಅನುವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

ಮೇಲ್ಕಂಡ ಆದೇಶವು ಈ ಕೆಳಕಂಡ ಷರತ್ತಿಗೊಳಪಟ್ಟಿರುತ್ತದೆ.

**ಷರತ್ತುಗಳು:-**

1. ಸಾಮಾನ್ಯ ವರ್ಗಾವಣೆಗೊಂಡಿರುವ ಸಿಬ್ಬಂಧಿಗಳು ಬೇರೆ ಸ್ಥಳಕ್ಕೆ ವರ್ಗಾವಣೆ ಕೋರುವಂತಿಲ್ಲ ಹಾಗೂ ಈ ಆದೇಶವನ್ನು ಪಾಲಿಸದ ಸಂಬಂಧಪಟ್ಟ ತೋಟಗಾರಿಕೆ ಸಹಾಯಕರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.
2. ವರ್ಗಾವಣೆ ಪ್ರಕ್ರಿಯೆ ಬಗ್ಗೆ ಯಾವುದಾದರೂ ಆಕ್ಷೇಪಣೆಗಳು / ದೂರುಗಳು ಸ್ವೀಕೃತಿಯಾದಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳುವ ಷರತ್ತಿಗೊಳಪಡಿಸಿದೆ.

3. ಸದರಿ ವರ್ಗಾವಣೆ ಆದೇಶದಲ್ಲಿ ವರ್ಗಾವಣೆಗೊಂಡಿರುವ ನೌಕರರುಗಳು ವರ್ಗಾವಣೆಗೊಂಡ ಸ್ಥಳಗಳಿಗೆ ವರದಿ ಮಾಡಿಕೊಳ್ಳುವ ಬಗ್ಗೆ ವಲಯ ಆಯುಕ್ತರು / ಜಂಟಿ ಆಯುಕ್ತರುಗಳು / ಇಲಾಖಾ ಮುಖ್ಯಸ್ಥರುಗಳು ಅಗತ್ಯ ಕ್ರಮ ಕೈಗೊಳ್ಳುವುದು.

31-7-24

ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದಂತೆ)

ವಿಶೇಷ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

31/7/24

ಪ್ರತಿಯನ್ನು: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಉಪ ನಿರ್ದೇಶಕರು (ತೋಟಗಾರಿಕೆ) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಯಲಹಂಕ) ರವರಿಗೆ ಕಳುಹಿಸಿದೆ.
: ತೋಟಗಾರಿಕೆ ಅಧೀಕ್ಷಕರು (ಪಶ್ಚಿಮ) ರವರಿಗೆ ಕಳುಹಿಸಿದೆ
: ಕಛೇರಿ ಪ್ರತಿ.